# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| 1 | ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 125 (52) |
| 2 | ಮಾನ್ಯ ಸದಸ್ಯರ ಹೆಸರು | ಶ್ರೀ ತಿಪ್ಪಣ್ಣಪ್ಪ ಕಮಕನೂರ ( ವಿಧಾನ ಸಭೆಯಿಂದ ಚುನಾಯಿತರಾದವರು) |
| 3 | ಉತ್ತರಿಸ ಬೇಕಾದ ದಿನಾಂಕ | 11-08-2025 |
| 4 | ಉತ್ತರಿಸಬೇಕಾದ ಸಚಿವರು | ಮಾನ್ಯ ವೈದ್ಯಕೀಯ ಶಿಕ್ಷಣ ಮತ್ತು ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಹಾಗೂ ಜೀವನೋಪಾಯ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದ ಎಲ್ಲಾ ಸರ್ಕಾರಿ ವೈದ್ಯಕೀಯ ಕಾಲೇಜುಗಳಿಗೆ ರಾಷ್ಟ್ರೀಯ ವೈದ್ಯಕೀಯ ಆಯೋಗವು (MNC) ಶೋಕಾಸ್ ನೋಟೀಸ್ ಜಾರಿ ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ವೈದ್ಯಕೀಯ ಶಿಕ್ಷಣ ಇಲಾಖೆಯ ಅಧೀನದಲ್ಲಿರುವ 22 ವೈದ್ಯಕೀಯ ಕಾಲೇಜುಗಳ ಪೈಕಿ 8 ವೈದ್ಯಕೀಯ ಕಾಲೇಜುಗಳ ವಾರ್ಷಿಕ ನವೀಕರಣಕ್ಕೆ ಸಂಬಂಧಿಸಿದಂತೆ ಬೋಧಕ ಸಿಬ್ಬಂದಿಗಳ ಕೊರತೆ ಹಾಗೂ ಇತರೆ ಸೌಲಭ್ಯಗಳ ನ್ಯೂನ್ಯತೆಗಳಿಗೆ ಸಂಬಂಧಿಸಿದಂತೆ ರಾಷ್ಟ್ರೀಯ ವೈದ್ಯಕೀಯ ಆಯೋಗದ ವತಿಯಿಂದ ಸಂಸ್ಥೆಗಳಿಗೆ ನೋಟೀಸ್ ನೀಡ ಲಾಗಿರುತ್ತದೆ. |
| ಆ) | ಬಂದಿದಲ್ಲಿ, ಹೊಸ ಕಾಲೇಜುಗಳಲ್ಲಿ ಸಿಬ್ಬಂದಿ ನೇಮಕವಾಗದಿರುವುದು ಕೆಲವೆಡೆ ಹೊರ ರೋಗಿ ವಿಭಾಗಗಳಲ್ಲಿ ಪ್ರವೇಶ ಹೆಚ್ಚದಿರುವುದು. ಬೋಧಕೇತರ ಸಿಬ್ಬಂದಿ, ಉಪಕರಣಗಳ ಕೊರತೆ ಇರುವುದು ಎಂ.ಆರ್.ಐ. ಸಿ.ಟಿ.ಸ್ಕ್ಯಾನ್, ರೇಡಿಯೋಲಜಿಸ್ಟ್‌ಗಳ ಸೇವೆ ಲಭ್ಯವಾಗಿರುವ ಬಗ್ಗೆ ಆಯೋಗವು ಸರ್ಕಾರಕ್ಕೆ ಸೂಚಿಸಿದಿಯೆ; | ರಾಷ್ಟ್ರೀಯ ವೈದ್ಯಕೀಯ ಆಯೋಗವು (ಎನ್‌ಎಂಸಿ) ನೀಡಿರುವ ಶೋಕಾಸ್‌ನೋಟಿಸ್‌ನಲ್ಲಿ ಮುಖ್ಯವಾಗಿ ಈ ಕೆಳಕಂಡ ಅಂಶಗಳಿಗೆ ವಿವರಣೆ ನೀಡಲು ಕೋರಿರುತ್ತಾರೆ.<br>1. ಬೋಧಕ ಸಿಬ್ಬಂದಿಗಳ ಕೊರತೆ.<br>2. ರೋಗ ತಪಾಸಣೆಯ ಪರೀಕ್ಷೆಗಳ ವಾರ್ಷಿಕ ತಖ್ತೆಯ ವರದಿ ಪ್ರಮಾಣ ಕಡಿಮೆ ಇರುವ ಬಗ್ಗೆ ಹಾಗೂ OPD/IPD ಪ್ರಮಾಣ ಕಡಿಮೆ ಇರುವ ಬಗ್ಗೆ.<br>3. MRI ಸೇವೆ ಲಭ್ಯವಿಲ್ಲದಿರುವ ಬಗ್ಗೆ.<br>1. ಬೋಧಕ ಸಿಬ್ಬಂದಿಗಳ ಕೊರತೆಗೆ ಸಂಬಂಧಿಸಿದಂತೆ ಮೀಸಲಾತಿ ಅನ್ವಯವಾಗುವ ಹುದ್ದೆಗಳಿಗೆ ನೇರನೇಮಕಾತಿ ಮಾಡಲು ನಿರ್ಬಂಧ ಇರುವುದರಿಂದ ಬೋಧಕ ಹುದ್ದೆಗಳನ್ನು ಭರ್ತಿ ಮಾಡಲು ಅವಕಾಶವಿರುವುದಿಲ್ಲ. ಆದ್ದರಿಂದ ಅವಶ್ಯವಿರುವ ಬೋಧಕ ಹುದ್ದೆಗಳನ್ನು ಗುತ್ತಿಗೆ ಆದಾರದಲ್ಲಿ ನೇಮಕಾತಿ ಮಾಡಿ ಕೊಳ್ಳಲು ಕ್ರಮವಹಿಸಲಾಗಿರುತ್ತದೆ.<br>2. ಹಲವು ಸಂಸ್ಥೆಗಳಲ್ಲಿ ಬರುವ ರೋಗಿಗಳ ಪ್ರಮಾಣ ಕಡಿಮೆಯಾಗಿರುವುದರಿಂದ ವಾರ್ಷಿಕ ಅಂಕಿ ಅಂಶಗಳ ಪ್ರಮಾಣದಲ್ಲಿ ಕಡಿಮೆ ಇರುತ್ತದೆ. ಅದ್ದರಿಂದ ಆಸ್ಪತ್ರೆಗೆ ಬರುವ ಎಲ್ಲಾ ರೋಗಿಗಳ ದಾಖಲಾತಿಗಳನ್ನು OPD/IPD, Investigation ಗಳನ್ನು ನಿಗದಿತವಾಗಿ ದಾಖಲೆಗೊಳಿಸಿ ಇಂದೀಕರಿಸಲು ತಿಳಿಸಲಾಗಿದೆ.<br>3. MRI ಲಭ್ಯತೆ ಇಲ್ಲದಿರುವ 10 ಸಂಸ್ಥೆಗಳಿಗೆ ಸದರಿ ಯಂತ್ರಗಳನ್ನು ಖರೀದಿಸಲು ಟೆಂಡರ್‌ಪ್ರಕ್ರಿಯೆ ಚಾಲನೆಯಲ್ಲಿರುತ್ತದೆ.<br>ಈ ಮೇಲ್ಕಂಡ ಅಂಶಗಳ ಹಿನ್ನಲೆಯಲ್ಲಿ ರಾಷ್ಟ್ರೀಯ ವೈದ್ಯಕೀಯ ಆಯೋಗದಿಂದ ನೀಡಲಾಗಿರುವ ಶೋಕಾಸ್ |

| | | |
|---|---|---|
| | | ನೋಟಿಸ್‌ನಲ್ಲಿ ಉಲ್ಲೇಖಿಸಿರುವ ನ್ಯೂನ್ಯತೆಗಳನ್ನು ಸರಿಪಡಿಸಿಕೊಳ್ಳಲು ಈಗಾಗಲೇ ಕ್ರಮ ಕೈಗೊಳ್ಳಲಾಗಿರುತ್ತದೆ ಹಾಗೂ ಕೈಗೊಂಡಿರುವ ಕ್ರಮದ ವರದಿಯನ್ನು ರಾಷ್ಟ್ರೀಯ ವೈದ್ಯಕೀಯ ಆಯೋಗಕ್ಕೆ ಸಲ್ಲಿಸಲಾಗಿದ್ದು, ಸದರಿ ವರದಿಯನ್ನು ಪರಿಗಣಿಸಿ ರಾಷ್ಟ್ರೀಯ ವೈದ್ಯಕೀಯ ಆಯೋಗವು Conditional Renewal ಅನ್ನು ಎಲ್ಲಾ 7 ಸರ್ಕಾರಿ ವೈದ್ಯಕೀಯ ಸಂಸ್ಥೆಗಳಿಗೆ ನೀಡಿರುತ್ತದೆ.<br>ಮುಂದುವರೆದಂತೆ, ಹಾಸನ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ ಸಂಬಂಧಿಸಿದಂತೆ ರಾಷ್ಟ್ರೀಯ ವೈದ್ಯಕೀಯ ಆಯೋಗವು ಮತ್ತೊಮ್ಮೆ ಪರಿಶೀಲಿಸಿ, ಪ್ರಸ್ತಾವನೆಯನ್ನು ಅಂಗೀಕರಿಸಿರುತ್ತದೆ. |
| ಇ) | ಆಯೋಗವು ಸೂಚಿಸಿರುವ ವಿಷಯಗಳ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು? | ಬೋಧಕ ಮತ್ತು ಭೋಧಕೇತರ ಸಿಬ್ಬಂದಿಗಳ ಕೊರತೆಯನ್ನು ಸರಿಪಡಿಸಿಕೊಳ್ಳಲು ತುರ್ತಾಗಿ ಗುತ್ತಿಗೆ ಆಧಾರದ ಮೇಲೆ ನೇಮಕಾತಿ ಪ್ರಕ್ರಿಯೆಯನ್ನು ಕೈಗೊಳ್ಳಲು ಸಂಬಂಧ ಪಟ್ಟ ಸಂಸ್ಥೆಗಳಿಗೆ ಈಗಾಗಲೇ ನಿರ್ದೇಶನವನ್ನು ನೀಡಲಾಗಿದ್ದು, ಅದರಂತೆ ಸಿಬ್ಬಂದಿಗಳ ನೇಮಕಾತಿ ಮಾಡಿಕೊಳ್ಳುವ ಪ್ರಕ್ರಿಯೆ ಚಾಲ್ತಿಯಲ್ಲಿರುತ್ತದೆ.<br>ಹಾಗೂ ಇತರೆ ಸೌಲಭ್ಯಗಳ ನ್ಯೂನ್ಯತೆಗೆ ಸಂಬಂಧಿಸಿದ್ದಂತೆ, ಸಂಬಂಧಪಟ್ಟ ವೈದ್ಯಕೀಯ ಸಂಸ್ಥೆಗಳ ಹಂತದಲ್ಲೇ ಕ್ರಮಕೈಗೊಳ್ಳಲಾಗಿರುತ್ತದೆ. |

ಸಂಖ್ಯೆ: **ಎಂಇಡಿ 242 ಆರ್‌ಐ 2025**

ಡಾ|| ಶರಣ ಪ್ರಕಾಶ ಆರ್. ಪಾಟೀಲ್
ವೈದ್ಯಕೀಯ ಶಿಕ್ಷಣ ಮತ್ತು ಕೌಶಲ್ಯಾಭಿವೃದ್ಧಿ,
ಉದ್ಯಮಶೀಲತೆ
ಹಾಗೂ ಜೀವನೋಪಾಯ ಸಚಿವರು